Akashvani : Bangalore
Regional Bulletin In Kannada
18.05.2026 / 14.30 hrs
ಆಕಾಶವಾಣಿ ಬೆಂಗಳೂರು
ಪ್ರದೇಶ ಸಮಾಚಾರ
<><*<><>*><>

ಮುಖ್ಯಾಂಶಗಳು

- ಸಾರಿಗೆ ನೌಕರರು ಮುಷ್ಕರದಲ್ಲಿ ಭಾಗವಹಿಸಿದರೆ ವೇತನ ಕಡಿತ- ಕೆಎಸ್‌ಆರ್‌ಟಿಸಿ ಎಚ್ಚರಿಕೆ
- ಕಲ್ಯಾಣ ಕರ್ನಾಟಕ ಪ್ರದೇಶದಲ್ಲಿ ಹಸಿರು ಹೊದಿಕೆ ಹೆಚ್ಚಿಸಲು ಸರ್ಕಾರ ಕ್ರಮ - ಅರಣ್ಯ ಸಚಿವ ಈಶ್ವರ್ ಖಂಡ್ರೆ
- ನೀಟ್ ಪ್ರಶ್ನೆ ಪತ್ರಿಕೆ ಸೋರಿಕೆ ಪ್ರಕರಣ; ವಿದ್ಯಾರ್ಥಿಗಳು ಆತಂಕಪಡುವ ಅಗತ್ಯವಿಲ್ಲ- ಕೇಂದ್ರ ಸಚಿವ ಪ್ರಹ್ಲಾದ್ ಜೋಶಿ
- ದಾವಣಗೆರೆ, ಹಾವೇರಿಯಲ್ಲಿ ಸುರಿದ ಮಳೆಗೆ ಜನಜೀವನ ಅಸ್ತವ್ಯಸ್ಥ; ಕೋಟ್ಯಂತರ ರೂಪಾಯಿ ಬೆಳೆಹಾನಿ
- ಇದೇ ೨೬ ರಂದು ಕೇರಳಕ್ಕೆ ನೈಋತ್ಯ ಮುಂಗಾರು ಪ್ರವೇಶ; ಕರಾವಳಿ ಜಿಲ್ಲೆಗಳಲ್ಲಿ ಇಂದು ಮಳೆ ಸಾಧ್ಯತೆ- ಹವಾಮಾನ ಇಲಾಖೆ ಮುನ್ನೆಚ್ಚರಿಕೆ

<><*<><>*><>

ವೇತನ ಪರಿಷ್ಕರಣೆಗೆ ಆಗ್ರಹಿಸಿ, ಮುಷ್ಕರಕ್ಕೆ ಸಿದ್ಧವಾಗಿರುವ ಸರ್ಕಾರಿ ಸಾರಿಗೆ ನೌಕರರಿಗೆ ಕೆಎಸ್‌ಆರ್‌ಟಿಸಿ ಶಿಸ್ತುಕ್ರಮದ ಎಚ್ಚರಿಕೆ ನೀಡಿದೆ. ಮೇ ೨೦ ರಂದು ನಡೆಯುವ ಹೋರಾಟದಲ್ಲಿ ಭಾಗಿಯಾಗಿ ಕೆಲಸ ಮಾಡದಿದ್ದರೆ, 'ನೋ ವರ್ಕ್ ನೋ ಪೇ' ಕ್ರಮ ಕೈಗೊಳ್ಳಲಾಗುವುದು ಎಂದು ತಿಳಿಸಿದ್ದಾರೆ. ಎಲ್ಲಾ ಸಾರಿಗೆ ನೌಕರರು ಕಡ್ಡಾಯವಾಗಿ ಕರ್ತವ್ಯಕ್ಕೆ ಹಾಜರಾಗಬೇಕು. ಪ್ರತಿಭಟನೆಯಲ್ಲಿ ಭಾಗಿಯಾದರೆ, ಸೇವಾ ನಿಯಮಗಳ ಅನ್ವಯ ಕಠಿಣ ಕ್ರಮ ಕೈಗೊಳ್ಳಲಾಗುವುದು ಎಂದು ಹೇಳಿದ್ದಾರೆ. ಇದೇ ೨೦ ರಂದು ಬಸ್‌ಗಳ ಕಾರ್ಯಾಚರಣೆಯಲ್ಲಿ ಯಾವುದೇ ವ್ಯತ್ಯಯವಾಗಬಾರದು. ಅನಿವಾರ್ಯ ಸಂದರ್ಭ ಹೊರತುಪಡಿಸಿ ನೌಕರರಿಗೆ ರಜೆ ಇಲ್ಲ ಎಂದು ಸ್ಪಷ್ಟಪಡಿಸಿದ್ದಾರೆ.

<><*<><>*><>

ಕಲ್ಯಾಣ ಕರ್ನಾಟಕ ಪ್ರದೇಶದಲ್ಲಿ ಹಸಿರು ಹೊದಿಕೆ ಹೆಚ್ಚಿಸಲು ಸರ್ಕಾರ ಕ್ರಮ ಕೊಳ್ಳಲಿದೆ ಎಂದು ರಾಜ್ಯ ಅರಣ್ಯ, ಪರಿಸರ ಸಚಿವ ಈಶ್ವರ್ ಬಿ ಖಂಡ್ರೆ ತಿಳಿಸಿದ್ದಾರೆ. ಕಲಬುರಗಿಯ ಚಿತ್ತಾಪುರ ಕ್ಷೇತ್ರದ ಕಳಗಿ ತಾಲೂಕಿನ ಮಾಡಬೂಲ್ ಗ್ರಾಮದ ಬಳಿ ನೂತನವಾಗಿ ನಿರ್ಮಿಸಲಾದ ಮೃಗಾಲಯ ಉದ್ಘಾಟಿಸಿದ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಪರಿಸರ ಸಂರಕ್ಷಣೆಯ ಬಗ್ಗೆ ಹೆಚ್ಚಿನ ಜಾಗೃತಿ

ಮೂಡಿಸುವ ಅಗತ್ಯತೆಯನ್ನು ಪ್ರತಿಪಾದಿಸಿದ್ದಾರೆ. ಕಲ್ಯಾಣ ಕರ್ನಾಟಕ ಪ್ರದೇಶದಲ್ಲಿ ಪ್ರಸ್ತುತ ಅರಣ್ಯ ಮತ್ತು ಮರಗಳ ಕೊರತೆ ತೀವ್ರವಾಗಿದ್ದು, ಹವಾಮಾನ ವೈಪರಿತ್ಯಕ್ಕೆ ಕಾರಣವಾಗಿದೆ. ಹಸಿರು ಹೊದಿಕೆಯ ಕೊರತೆಯಿಂದ ಹವಾಮಾನ ಅಸಮತೋಲನ ಉಂಟಾಗುತ್ತದೆ ಎಂದು ಅಭಿಪ್ರಾಯಪಟ್ಟಿದ್ದಾರೆ. ಕಲಬುರಗಿಯ ೪೨.೩೩ ಎಕರೆ ಪ್ರದೇಶದಲ್ಲಿ ೪೪ ಕೋಟಿ ರೂಪಾಯಿ ವೆಚ್ಚದಲ್ಲಿ ಈ ಮೃಗಾಲಯ ನಿರ್ಮಿಸಲಾಗಿದೆ. ೫೬ ವಿವಿಧ ಜಾತಿಯ ಪ್ರಾಣಿಗಳನ್ನು ತರಲು ನಿರ್ಧರಿಸಲಾಗಿದ್ದು, ಬನ್ನೇಘಟ್ಟ ರಾಷ್ಟ್ರೀಯ ಉದ್ಯಾನವನದಿಂದ ೨ ಹುಲಿಗಳನ್ನು ಈಗಗಲೇ ಸ್ಥಳಾಂತರಿಸಲಾಗಿದೆ.

<><*<><>*><>

ಬಾಗಲಕೋಟೆ ಜಿಲ್ಲೆಯ ಬಾದಾಮಿ ತಾಲೂಕಿನ ಮಹಾಕೂಟದಲ್ಲಿ ಬಿಜೆಪಿ ವತಿಯಿಂದ ಆಯೋಜಿಸಲಾದ "ಪಂಡಿತ ದೀನದಯಾಳ್ ಉಪಾಧ್ಯಾಯ ಪ್ರಶಿಕ್ಷಣ ಮಹಾಭಿಯಾನ" ಕಾರ್ಯಕ್ರಮಕ್ಕೆ ಕೇಂದ್ರ ಸಚಿವ ಪ್ರಹ್ಲಾದ ಜೋಶಿ ಚಾಲನೆ ನೀಡಿದರು.  ಮಹಾಕೂಟೇಶ್ವರ ದೇವಸ್ಥಾನ ಆವರಣದಲ್ಲಿ ನಡೆದ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಪಂಡಿತ ದೀನದಯಾಳ್ ಉಪಾಧ್ಯಾಯರ ಆದರ್ಶಗಳನ್ನು ಕಾರ್ಯಕರ್ತರು ಅಳವಡಿಸಿಕೊಳ್ಳಬೇಕೆಂದು ಕರೆ ನೀಡಿದರು. ಕಾರ್ಯಕ್ರಮಕ್ಕೂ ಮುನ್ನ ಸುದ್ದಿಗಾರರೊಂದಿಗೆ ಮಾತನಾಡಿದ ಸಚಿವರು, ನೀಟ್ ಪ್ರಶ್ನೆಪತ್ರಿಕೆ ಸೋರಿಕೆ ಪ್ರಕರಣ ಕುರಿತು ಪ್ರತಿಕ್ರಿಯಿಸಿ, ವಿದ್ಯಾರ್ಥಿಗಳಿಗೆ ಅನ್ಯಾಯವಾಗದಂತೆ ಸರ್ಕಾರ ಕ್ರಮ ಕೈಗೊಂಡಿದ್ದು, ಆತಂಕ ಪಡುವ ಅಗತ್ಯವಿಲ್ಲ ಎಂದು ಸ್ಪಷ್ಟಪಡಿಸಿದ್ದಾರೆ.

ಧ್ವನಿ: ಕೇಂದ್ರ ಸಚಿವ ಪ್ರಹ್ಲಾದ ಜೋಶಿ (   ಸೆಕೆಂಡ್ಸ್)

<><*<><>*><>

ಜಿಬಿಎ ಐದು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ವಿಪತ್ತು ನಿರ್ವಹಣೆಗಾಗಿ ಅಧಿಕಾರಿಗಳು ಸದಾ ಸನ್ನದ್ಧರಾಗಿರುವಂತೆ ಮುಖ್ಯ ಆಯುಕ್ತ ಮಹೇಶ್ವರ್ ರಾವ್ ಸೂಚನೆ ನೀಡಿದ್ದಾರೆ. ಮಳೆಗಾಲದ ವೇಳೆ ರಾಜಕಾಲುವೆಗಳನ್ನು ಸ್ವಚ್ಛಗೊಳಿಸುವ ಎಎಂಸಿ ತಂಡ, ವಿಪತ್ತು ನಿರ್ವಹಣೆ ತಂಡ, ಮರ ಕಟಾವು ತಂಡ, ಸಿಲ್ಟ್ ಅಂಡ್ ಟ್ರ್ಯಾಕ್ಟರ್ ತಂಡ, ಸೇರಿದಂತೆ ಮುನ್ನೆಚ್ಚರಿಕಾ ಕಾರ್ಯಗಳಿಗೆ ಬಳಸುವ ಸಂಪನ್ಮೂಲಗಳ ಪ್ರದರ್ಶನ ಮತ್ತು ಸನ್ನದ್ಧತೆಯನ್ನು ಅವರಿಂದು ಪರಿಶೀಲನೆ ನಡೆಸಿದರು. ಮಳೆಗಾಲದಲ್ಲಿ ಕಾರ್ಯನಿರ್ವಹಿಸುವ ಸಿಬ್ಬಂದಿಯೊಂದಿಗೆ ಸಂವಹನ ನಡೆಸಿ ಯಂತ್ರೋಪಕರಣಗಳ ಕಾರ್ಯಕ್ಷಮತೆಯನ್ನು ಪರಿಶೀಲಿಸಿದರು.

<><*<><>*><>

ದಾವಣಗೆರೆ ಜಿಲ್ಲೆಯಲ್ಲಿ ಕಳೆದ ಎರಡು ದಿನಗಳಿಂದ  ಸುರಿಯುತ್ತಿರುವ ಭಾರೀ ಮಳೆಗೆ  ೬೨೨ ಎಕರೆ ಪ್ರದೇಶದಲ್ಲಿ ಬೆಳೆ ನಾಶವಾಗಿದೆ. ಪ್ರಾಥಮಿಕ ಅಂದಾಜಿನ ಪ್ರಕಾರ ಒಟ್ಟು ೧ ಕೋಟಿ ೪೧ ಲಕ್ಷ

ರೂಪಾಯಿಗೂ ಅಧಿಕ ಹಾನಿ ಉಂಟಾಗಿದೆ ಎಂದು ಜಿಲ್ಲಾಧಿಕಾರಿ ಜಿ.ಎಂ. ಗಂಗಾಧರಸ್ವಾಮಿ ತಿಳಿಸಿದ್ದಾರೆ. ಮಳೆಯಿಂದಾಗಿ ಜಿಲ್ಲೆಯ ಚನ್ನಗಿರಿ ಮತ್ತು ಜಗಳೂರು ತಾಲೂಕುಗಳಲ್ಲಿ ಒಟ್ಟು ೮ ಮನೆಗಳು ಭಾಗಶಃ ಕುಸಿದಿವೆ. ಜಿಲ್ಲೆಯಲ್ಲೇ ಚನ್ನಗಿರಿ ತಾಲೂಕಿನಲ್ಲಿ ಮಳೆಯ ತೀವ್ರತೆ ಹೆಚ್ಚಾಗಿದ್ದು, ಗರಿಷ್ಠ ಪ್ರಮಾಣದ ಹಾನಿ ವರದಿಯಾಗಿದೆ. ಈ ತಾಲೂಕೊಂದರಲ್ಲೇ ೫೪೦ ಎಕರೆ ಪ್ರದೇಶದಲ್ಲಿ ಬೆಳೆ ನಾಶವಾಗಿದೆ. ಹರಿಹರ ತಾಲೂಕಿನಲ್ಲಿ ೩೦ ಎಕರೆಯಲ್ಲಿದ್ದ ಅಡಿಕೆ ಹಾಗೂ ತೇಗದ ಮರಗಳು ಧರೆಗುರುಳಿದ್ದು, ೪ ಕೋಟಿ ೩೦ ಲಕ್ಷ ರೂಪಾಯಿ ನಷ್ಟವಾಗಿದೆ. ದಾವಣಗೆರೆ ತಾಲೂಕಿನಲ್ಲಿ ೩೦ ಎಕರೆ ಬೆಳೆ ಹಾನಿಯಿಂದ ೩ ಕೋಟಿ ೪೦ ಲಕ್ಷ ರೂಪಾಯಿ ಹಾಗೂ ಜಗಳೂರು ತಾಲೂಕಿನಲ್ಲಿ ೧೫ ಎಕರೆ ಬೆಳೆ ನಾಶವಾಗಿ ೨ ಕೋಟಿ ೮೫ ಲಕ್ಷ ರೂಪಾಯಿ ನಷ್ಟ ಸಂಭವಿಸಿದೆ ಎಂದು ಜಿಲ್ಲಾಧಿಕಾರಿ ಮಾಹಿತಿ ನೀಡಿದ್ದಾರೆ.

<><*<><>*><>

ಹಾವೇರಿ ಜಿಲ್ಲೆಯಾದ್ಯಂತ ನಿನ್ನೆ ಸುರಿದ ಗುಡುಗು, ಸಿಡಿಲು, ಮಿಂಚು ಸಹಿತ ಮುಂಗಾರು ಪೂರ್ವ ಧಾರಾಕಾರ ಮಳೆಗೆ ಜನಜೀವನ ಅಸ್ತವ್ಯಸ್ತಗೊಂಡಿದೆ. ಗಾಳಿ ಮಳೆಗೆ ಹಲವು ಕಡೆ ಶಾಲೆ ಹಾಗೂ ರೇಷ್ಮೆ ಮನೆಗೆ ಹೊದಿಸಿದ್ದ ತಗಡಿನ ಶೀಟ್‌ಗಳು ಹಾರಿ ಹೋಗಿದ್ದು, ಹಂಸಭಾವಿಯಲ್ಲಿ ಬೆಲೆ ಬಾಳುವ ಎತ್ತಿಗೆ ಸಿಡಿಲು ಬಡಿದು ಜೀವ ಹಾನಿಯಾಗಿದೆ. ಕೆಲವಡೆ ವಿದ್ಯುತ್ ಕಂಬ, ಗಿಡಮರಗಳು ರಭಸದಿಂದ ಬೀಸಿದ ಗಾಳಿಗೆ ಧರೆಗುರುಳಿವೆ. ವಿದ್ಯುತ್ ಕಂಬಗಳು ನೆಲಕ್ಕುರುಳಿದ ಪರಿಣಾಮ ರಾತ್ರಿ ಪೂರ್ತಿ ವಿದ್ಯುತ್ ಪೂರೈಕೆಯಲ್ಲಿ ವ್ಯತ್ಯಯ ಉಂಟಾಗಿದೆ. ೨೦೨೬-೨೭ ಸಾಲಿನ ಪೂರ್ವ ಮುಂಗಾರಿನಲ್ಲಿ ಈವರೆಗೆ ಜಿಲ್ಲೆಯಲ್ಲಿ ೧೧೨ ಮನೆಗಳಿಗೆ ಹಾನಿಯುಂಟಾಗಿದೆ. ೧ ಸಾವಿರ ೭೨೧ ರೈತರ ೧ ಸಾವಿರ ೨೩೫.೮ ಹೆಕ್ಟೇರ್ ಬೆಳೆ ಹಾನಿ ಸಂಭವಿಸಿದೆ. ವಿಪತ್ತು ನಿರ್ವಹಣೆಗಾಗಿ ಜಿಲ್ಲಾಧಿಕಾರಿಗಳು ಹಾಗೂ ತಹಶೀಲ್ದಾರರ ಪಿಡಿ ಖಾತೆಯಲ್ಲಿ ಒಟ್ಟು ೧ ಸಾವಿರ ೮೭೨ ಲಕ್ಷ ರೂಪಾಯಿ ಅನುದಾನ ಲಭ್ಯವಿದೆ ಎಂದು ಜಿಲ್ಲಾಧಿಕಾರಿ ಡಾ.ವಿಜಯಮಹಾಂತೇಶ ದಾನಮ್ಮನವರ ತಿಳಿಸಿದ್ದಾರೆ. ಮುಂಬರುವ ಮಳೆಗಾಲದ ಸಂದರ್ಭದಲ್ಲಿ ಬಾರಿ ಮಳೆ, ಗಾಳಿ, ಗುಡುಗು, ಮಿಂಚು ಸಂಭವಿಸುವ ಸಾಧ್ಯತೆ ಇರುವುದರಿಂದ ಸಾರ್ವಜನಿಕರು ಅಗತ್ಯ ಮುನ್ನೆಚ್ಚರಿಕೆ ಕ್ರಮಗಳನ್ನು ತೆಗೆದುಕೊಳ್ಳಬೇಕು ಎಂದು ಹೇಳಿದ್ದಾರೆ.

<><*<><>*><>

ನೈರುತ್ಯ ಮುಂಗಾರು ಈ ತಿಂಗಳ ೨೬ರಂದು ಕೇರಳಕ್ಕೆ ಅಪ್ಪಳಿಸುವ ಸಾಧ್ಯತೆ ಇದೆ. ಜೂನ್ ೧ರ ಸಾಮಾನ್ಯ ದಿನಾಂಕಕ್ಕಿಂತ ೬ ದಿನ ಮುಂಚಿತವಾಗಿಯೇ ನೈರುತ್ಯ ಮುಂಗಾರು ಪ್ರಾರಂಭವಾಗುವ ಸಾಧ್ಯತೆ ಇದೆ ಎಂದು ಭಾರತೀಯ ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ. ಮುಂದಿನ ಎರಡು-ಮೂರು ದಿನಗಳಲ್ಲಿ ಆಗ್ನೇಯ ಅರೇಬಿಯನ್ ಸಮುದ್ರ, ಬಂಗಾಳಕೊಲ್ಲಿ, ಅಂಡಮಾನ್ ದ್ವೀಪಗಳು ಮತ್ತು ಅಂಡಮಾನ್ ಸಮುದ್ರದ ಹೆಚ್ಚಿನ ಭಾಗಗಳತ್ತ ನೈರುತ್ಯ ಮುಂಗಾರು ಸಾಗುವ ಮುನ್ಸೂಚನೆ ಇದೆ. ಕರಾವಳಿ ಕರ್ನಾಟಕದಲ್ಲಿ ಇಂದು ಭಾರಿ ಮಳೆಯಾಗುವ ಸಾಧ್ಯತೆ ಇದೆ. ರಾಜ್ಯದ ಕರಾವಳಿಯ

ಬಹುತೇಕ ಕಡೆ, ದಕ್ಷಿಣ ಒಳನಾಡಿನ ಹಲವೆಡೆ ಹಾಗೂ ಉತ್ತರ ಒಳನಾಡಿನ ಕೆಲವೆಡೆ ನಿನ್ನೆ ಮಳೆಯಾಗಿದೆ. ಉತ್ತರ ಕನ್ನಡ ಜಿಲ್ಲೆಯ ಬಹುತೇಕ ಕಡೆಗಳಲ್ಲಿ ಇಂದು ಭಾರಿ ಗಾಳಿ ಹಾಗೂ ಮಿಂಚು-ಗುಡುಗುಸಹಿತ ಮಳೆಯಾಗುವ ಸಾಧ್ಯತೆ ಇದ್ದು, ಮೀನುಗಾರರು ಸಮುದ್ರಕ್ಕೆ ಇಳಿಯದಂತೆ ಮುನ್ನೆಚ್ಚರಿಕೆ ನೀಡಲಾಗಿದೆ.

<><*<><>*><>

ನವದೆಹಲಿಯಲ್ಲಿ ರಾಮಕೃಷ್ಣ ಮಿಷನ್‌ನ ವಿವೇಕಾನಂದ ಸಭಾಂಗಣದಲ್ಲಿ ಭಾರತೀಯ ಸಂತ ಮಹಾಪರಿಷತ್ ಜಾಗತಿಕ ಸಮ್ಮೇಳನ ನಡೆಯುತ್ತಿದೆ. ಸಮ್ಮೇಳನದಲ್ಲಿ ದೇಶ-ವಿದೇಶಗಳ ವಿವಿಧ ಸಂಪ್ರದಾಯಗಳನ್ನು ಪ್ರತಿನಿಧಿಸುವ ೩೮೬ ಸಾಧು ಸಂತರು ಭಾಗವಹಿಸಿದ್ದಾರೆ. ಹರಿಹರಪುರ ಮಠದ ಸಚ್ಚಿದಾನಂದ ಸರಸ್ವತಿ ಜೀ ಮಹಾರಾಜ್ ಸೇರಿದಂತೆ ರಾಜ್ಯದ ಸಾಧುಸಂತರು ಭಾಗವಹಿಸಿದ್ದಾರೆ.

<><*<><>*><>

ಮಂಗಳೂರಿನ ತಣ್ಣೀರುಬಾವಿಯ ಬ್ಲೂ ಬೇ ಇಕೋ ಬೀಚ್‌ನಲ್ಲಿ ಇದೇ ೧೯ರಿಂದ ೩೧ರವರೆಗೆ ಇಂಡಿಯನ್ ಓಪನ್ ಆಫ್ ಸರ್ಫಿಂಗ್ ಚಾಂಪಿಯನ್ ಶಿಪ್ ಆಯೋಜಿಸಲಾಗಿದೆ ಎಂದು ದಕ್ಷಿಣ ಕನ್ನಡ ಜಿಲ್ಲಾಧಿಕಾರಿ ದರ್ಶನ್ ಎಚ್.ವಿ ತಿಳಿಸಿದ್ದಾರೆ. ಮಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕರ್ನಾಟಕ ಪ್ರವಾಸೋದ್ಯಮ ಇಲಾಖೆ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಹಾಗೂ ಕರ್ನಾಟಕ ಸರ್ಫಿಂಗ್ ಅಸೋಸಿಯೇಷನ್ ನೇತೃತ್ವದಲ್ಲಿ ಐಚಿ-ನಗೋಯಾ ಏಷ್ಯನ್ ಗೇಮ್ಸ್-೨೦೨೬ ಹಿನ್ನೆಲೆಯಲ್ಲಿ ಈ ಸರ್ಫಿಂಗ್ ಚಾಂಪಿಯನ್ ಶಿಪ್ ಆಯೋಜಿಸಲಾಗಿದೆ.

ಧ್ವನಿ: ಜಿಲ್ಲಾಧಿಕಾರಿ ದರ್ಶನ್.ಎಚ್.ವಿ. (   ಸೆಕೆಂಡ್ಸ್)

<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>

<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ಸಂಜೆ ೬.೪೦ ಕ್ಕೆ <>*><>